# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 96 |
| ಸದಸ್ಯರ ಹೆಸರು | : | ಶ್ರೀ ಹೆಚ್.ಎಸ್. ಗೋಪಿನಾಥ್<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 04.03.2025 |
| ಉತ್ತರಿಸುವ ಸಚಿವರು | : | ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವರು. |

<table>
<tr><th>ಕ್ರ.<br>ಸಂ</th><th>ಪ್ರಶ್ನೆಗಳು</th><th>ಉತ್ತರ</th></tr>
<tr><td>ಅ)</td><td>ಬೆಂಗಳೂರು ನಗರ ಜಿಲ್ಲೆಯಲ್ಲಿ ಎಷ್ಟು ಸಣ್ಣ ಕೈಗಾರಿಕೆಗಳಿವೆ ಮತ್ತು ಸಣ್ಣ ಕೈಗಾರಿಕೆ ವ್ಯಾಪ್ತಿಗೆ ಬರುವ ಉದ್ಯಮಗಳಾವುವು; (ವಿವರ ನೀಡುವುದು)</td><td>ಭಾರತ ಸರ್ಕಾರದ ಉದ್ಯಮ್ ತಂತ್ರಾಂಶದಲ್ಲಿ ಜುಲೈ 2020 ರಿಂದ ಜನವರಿ 2025ರ ಅಂತ್ಯಕ್ಕೆ ಬೆಂಗಳೂರು ನಗರ ಜಿಲ್ಲೆಯಲ್ಲಿ ಒಟ್ಟು 4,88,317 ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳು ನೊಂದಣಿಯಾಗಿದ್ದು, ಅವುಗಳ ಪೈಕಿ ಸೂಕ್ಷ್ಮ-4,71,039, ಸಣ್ಣ-15,570 ಹಾಗೂ ಮಧ್ಯಮ-1708 ಕೈಗಾರಿಕೆಗಳು ಇರುತ್ತವೆ.</td></tr>
<tr><td>ಆ)</td><td>ಸಣ್ಣ ಕೈಗಾರಿಕೆ ಇಲಾಖೆಯ ಅಧೀನದಲ್ಲಿ ಬರುವ ಸಾರ್ವಜನಿಕ ನಿಗಮಗಳು / ಕಂಪನಿಗಳು ಶಾಸನಬದ್ಧ ಮಂಡಳಿಗಳು, ಉದ್ಯಮಗಳು, ಸೊಸೈಟಿಗಳು ಹಾಗೂ ಇತರೆ ಅಂಗ ಸಂಸ್ಥೆಗಳಾವುವು;</td><td>ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯ ಸಣ್ಣ ಪ್ರಮಾಣದ ಕೈಗಾರಿಕೆಗಳು ವ್ಯಾಪ್ತಿಯಡಿ 03 ಸಾರ್ವಜನಿಕ ಉದ್ದಿಮೆಗಳು / ಕಂಪನಿಗಳು ಇದ್ದು, ವಿವರ ಈ ಕೆಳಕಂಡಂತಿದೆ:
<table>
<tr><th colspan="2">ನಿಗಮಗಳು</th></tr>
<tr><td>1)</td><td>ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮ ನಿಯಮಿತ</td></tr>
<tr><td>2)</td><td>ಕರ್ನಾಟಕ ರಾಜ್ಯ ಕರಕುಶಲ ಅಭಿವೃದ್ಧಿ ನಿಗಮ ನಿಯಮಿತ</td></tr>
<tr><td>3)</td><td>ಕರ್ನಾಟಕ ರಾಜ್ಯ ತೆಂಗಿನ ನಾರಿನ ಅಭಿವೃದ್ಧಿ ನಿಗಮ ನಿಯಮಿತ</td></tr>
</table>
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯ ಸಣ್ಣ ಪ್ರಮಾಣದ ಕೈಗಾರಿಕೆಗಳು ವ್ಯಾಪ್ತಿಯಡಿ 01 ಮಂಡಳಿ ಇದ್ದು, ವಿವರ ಈ ಕೆಳಕಂಡಂತಿದೆ:
<table>
<tr><th colspan="2">ಮಂಡಳಿ</th></tr>
<tr><td>1)</td><td>ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ</td></tr>
</table>
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯ ಸಣ್ಣ ಪ್ರಮಾಣದ ಕೈಗಾರಿಕೆಗಳು ವ್ಯಾಪ್ತಿಯಡಿ 02 ಸಂಸ್ಥೆಗಳು ಇದ್ದು, ವಿವರ ಈ ಕೆಳಕಂಡಂತಿದೆ:
<table>
<tr><th colspan="2">ಸಂಸ್ಥೆಗಳು</th></tr>
<tr><td>1)</td><td>ಕರ್ನಾಟಕ ಚರ್ಮ ಮತ್ತು ಫ್ಯಾಷನ್ ತಂತ್ರಜ್ಞಾನ ಸಂಸ್ಥೆ (ಕಿಲ್ಟ್)</td></tr>
<tr><td>2)</td><td>ಕರ್ನಾಟಕ ತಾಂತ್ರಿಕ ಉನ್ನತೀಕರಣ ಪರಿಷತ್ತು</td></tr>
</table>
</td></tr>
</table>

<table>
<tr>
<td></td>
<td></td>
<td>
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯ ಸಣ್ಣ ಪ್ರಮಾಣದ ಕೈಗಾರಿಕೆಗಳು ವ್ಯಾಪ್ತಿಯಡಿ 01 ಸಹಾಕಾರಿ ಮಹಾಮಂಡಳಿ ಇದ್ದು, ವಿವರ ಈ ಕೆಳಕಂಡಂತಿದೆ:
<table>
<tr><th colspan="2">ಸೊಸೈಟಿ</th></tr>
<tr><td>1)</td><td>ಕರ್ನಾಟಕ ರಾಜ್ಯ ತೆಂಗಿನ ನಾರಿನ ಸಹಕಾರ ಮಹಾಮಂಡಳಿ ನಿಯಮಿತ</td></tr>
</table>
</td>
</tr>
<tr>
<td>ಇ)</td>
<td>ರಾಜ್ಯದಲ್ಲಿ ಎಷ್ಟು ಸಣ್ಣ ಕೈಗಾರಿಕೆ ಘಟಕಗಳು ಪ್ರಾರಂಭವಾಗಿ ಕಾರ್ಯಚರಣೆಯಲ್ಲಿವೆ; ಇವುಗಳಿಗೆ ಸರ್ಕಾರ ವಿಧಿಸಿರುವ ಮಾನದಂಡಗಳೇನು? (ವಿವರ ನೀಡುವುದು)</td>
<td>
ಭಾರತ ಸರ್ಕಾರದ ಉದ್ಯಮ್ ತಂತ್ರಾಂಶದಲ್ಲಿ ಜುಲೈ 2020 ರಿಂದ ಜನವರಿ 2025ರ ಅಂತ್ಯಕ್ಕೆ ರಾಜ್ಯದಲ್ಲಿ ಒಟ್ಟಾರೆ 18,89,231 ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳು ನೊಂದಣಿಯಾಗಿದ್ದು, ಅವುಗಳಲ್ಲಿ 18,49,684 ಸೂಕ್ಷ್ಮ, 36557 ಸಣ್ಣ ಮತ್ತು 2990 ಮಧ್ಯಮ ಕೈಗಾರಿಕೆ ಇರುತ್ತವೆ.<br><br>
ಭಾರತ ಸರ್ಕಾರವು ಬಂಡವಾಳ ಹೂಡಿಕೆ ಮತ್ತು ವಹಿವಾಟು ಆಧರಿಸಿ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳನ್ನಾಗಿ ವರ್ಗೀಕರಿಸಿದ್ದು, ವಿವರಗಳು ಕೆಳಕಂಡಂತಿವೆ:
<table>
<tr><th>ವರ್ಗ</th><th>ವಿವರಗಳು</th></tr>
<tr><td>ಸೂಕ್ಷ್ಮ</td><td>ರೂ.2.50 ಕೋಟಿವರೆಗೆ ಯಂತ್ರೋಪಕರಣಗಳ ಮೇಲೆ ಹೂಡಿಕೆ ಮತ್ತು ರೂ.10.00 ಕೋಟಿ ವಾರ್ಷಿಕ ವಹಿವಾಟು.</td></tr>
<tr><td>ಸಣ್ಣ</td><td>ರೂ.25.00 ಕೋಟಿವರೆಗೆ ಯಂತ್ರೋಪಕರಣಗಳ ಮೇಲೆ ಹೂಡಿಕೆ ಮತ್ತು ರೂ.100.00 ಕೋಟಿ ವಾರ್ಷಿಕ ವಹಿವಾಟು.</td></tr>
<tr><td>ಮಧ್ಯಮ</td><td>ರೂ.125.00 ಕೋಟಿವರೆಗೆ ಯಂತ್ರೋಪಕರಣಗಳ ಮೇಲೆ ಹೂಡಿಕೆ ಮತ್ತು ರೂ.500.00 ಕೋಟಿ ವಾರ್ಷಿಕ ವಹಿವಾಟು.</td></tr>
</table>
ಹೊಸದಾಗಿ ಸಣ್ಣ ಕೈಗಾರಿಕೆ ಪ್ರಾರಂಭ ಮಾಡುವ ಕೈಗಾರಿಕೆಗಳಿಗೆ ಈ ಕೆಳಕಂಡ ಮಾನದಂಡಗಳು ಇರುತ್ತವೆ:<br><br>
1. ಮಾಲೀಕತ್ವ ಉದ್ಯಮ ಸ್ಥಾಪಿಸಲು ಬಯಸುವ ಉದ್ಯಮಶೀಲರು ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ / ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದ ನಿವೇಶನದಲ್ಲಿ ಕೈಗಾರಿಕೆಯನ್ನು ಸ್ಥಾಪಿಸುವ ಉದ್ದೇಶವನ್ನು ಹೊಂದಿದಲ್ಲಿ "ಕಾಮನ್ ಅಪ್ಲಿಕೇಷನ್ ಫಾರಂ"ನ್ನು ಭರ್ತಿ ಮಾಡಿ ಅರ್ಜಿಯನ್ನು ಸಂಬಂಧಿಸಿದ ಜಂಟಿ ನಿರ್ದೇಶಕರು, ಜಿಲ್ಲಾ ಕೈಗಾರಿಕಾ ಕೇಂದ್ರಕ್ಕೆ ಸಲ್ಲಿಸಬೇಕಾಗುತ್ತದೆ.<br>
2. ಜಿಲ್ಲಾ ಕೈಗಾರಿಕಾ ಕೇಂದ್ರವು ಈ ಪ್ರಸ್ತಾವನೆಯನ್ನು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜರಗುವ "ಜಿಲ್ಲಾ ಮಟ್ಟದ ಏಕಗವಾಕ್ಷಿ ಸಮಿತಿ" ಸಭೆಯಲ್ಲಿ ಮಂಡಿಸಿ ಅನುಮೋದನೆ ಪಡೆದು ತಾತ್ವಿಕ ಅನುಮೋದನಾ ಪತ್ರವನ್ನು ಉದ್ಯಮಶೀಲರಿಗೆ ನೀಡುತ್ತದೆ.<br>
3. ನಂತರ ಉದ್ಯಮಶೀಲರು ಕರ್ನಾಟಕ ಕೈಗಾರಿಕಾ
</td>
</tr>
</table>

| | | |
|---|---|---|
| | | ಪ್ರದೇಶಾಭಿವೃದ್ಧಿ ಮಂಡಳಿಗೆ ನಿವೇಶನಕ್ಕೆ ಅರ್ಜಿ ಸಲ್ಲಿಸಿ ನಿವೇಶನವನ್ನು ಪಡೆದುಕೊಳ್ಳಬೇಕಾಗುತ್ತದೆ. ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದ ನಿವೇಶನವಾದಲ್ಲಿ ಅದಕ್ಕೆ ಸಂಬಂಧಿಸಿದ ಸಮಿತಿಯು ನಿವೇಶನವನ್ನು ಹಂಚಿಕೆ ಮಾಡುತ್ತದೆ.<br>4. ಉದ್ಯಮಶೀಲರು ನಿವೇಶನದ ಹಂಚಿಕೆಯಾದ ನಂತರ ಯೋಜನೆಯ ಅನುಷ್ಠಾನಕ್ಕೆ ಅಗತ್ಯವಾದ ಹಣಕಾಸಿನ ನೆರವಿಗಾಗಿ ಬ್ಯಾಂಕ್ / ಕೆ.ಎಸ್.ಎಫ್.ಸಿ.ಗೆ ಯೋಜನಾ ವರದಿ ಮತ್ತು ಇತರೆ ಅಗತ್ಯ ದಾಖಲೆಗಳನ್ನು ಸಲ್ಲಿಸಿ ಸಾಲ ಮಂಜೂರಾತಿಯನ್ನು ಪಡೆದುಕೊಳ್ಳಬೇಕಾಗುತ್ತದೆ.<br>5. ಕೈಗಾರಿಕಾ ಕಟ್ಟಡ ನಿರ್ಮಾಣಕ್ಕಾಗಿ ಕೆ.ಐ.ಎ.ಡಿ.ಬಿ. / ಕೆ.ಎಸ್.ಎಸ್.ಐ.ಡಿ.ಸಿ. / ಸ್ಥಳೀಯ ಪ್ರಾಧಿಕಾರದಿಂದ ನಕ್ಷೆ ಅನುಮೋದನೆ ಪಡೆದುಕೊಂಡು ಕಟ್ಟಡ ನಿರ್ಮಾಣ ಪ್ರಾರಂಭಿಸಬೇಕಾಗುತ್ತದೆ.<br>6. ಕೈಗಾರಿಕಾ ಚಟುವಟಿಕೆಯನ್ನು ಆಧರಿಸಿ ಕರ್ನಾಟಕ ರಾಜ್ಯ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿಯಿಂದ "ಕನ್ಸೆಂಟ್ ಫಾರ್ ಎಸ್ಟ್ಯಾಬ್ಲಿಷ್‌ಮೆಂಟ್" ಅನುಮತಿಯನ್ನು ಪಡೆಯಬೇಕಾಗುತ್ತದೆ.<br>7. ವಿದ್ಯುತ್ ಸಂಪರ್ಕಕ್ಕಾಗಿ ಸಂಬಂಧಿಸಿದ ಎಸ್ಕಾಂನಿಂದ ಮಂಜೂರಾತಿಯನ್ನು ಪಡೆಯಬೇಕಾಗುತ್ತದೆ.<br>8. ನೀರಿನ ಸಂಪರ್ಕಕ್ಕಾಗಿ ಸಂಬಂಧಿಸಿದ ಪ್ರಾಧಿಕಾರದಿಂದ ಅನುಮತಿಯನ್ನು ಪಡೆಯಬೇಕಾಗುತ್ತದೆ.<br>9. ಚಟುವಟಿಕೆ / ಯಂತ್ರೋಪಕರಣಗಳನ್ನು ಆಧರಿಸಿ "ಫ್ಯಾಕ್ಟರೀಸ್ ಮತ್ತು ಬಾಯ್ಲರ್" ಇಲಾಖೆಯಿಂದ ಅನುಮತಿ ಪಡೆಯಬೇಕಾಗುತ್ತದೆ.<br>10. ಕಾರ್ಮಿಕರ ಸಂಖ್ಯೆಯನ್ನು ಆಧರಿಸಿ ಕಾರ್ಮಿಕ ಇಲಾಖೆಯಿಂದ ಅನುಮೋದನೆ ಪಡೆದುಕೊಳ್ಳಬೇಕಾಗುತ್ತದೆ.<br>11. ಕಾರ್ಮಿಕರ ಸಂಖ್ಯೆ 20 ಕ್ಕೂ ಹೆಚ್ಚಾದಲ್ಲಿ ಇ.ಎಸ್.ಐ/ ಪಿ.ಎಫ್ / ವೃತ್ತಿ ತೆರಿಗೆ ನೊಂದಣಿ ಪಡೆಯಬೇಕಾಗುತ್ತದೆ.<br>12. ಉದ್ದೇಶಿತ ಕೈಗಾರಿಕೆಯ ವಾರ್ಷಿಕ ವಹಿವಾಟು ರೂ.40 ಲಕ್ಷಕ್ಕಿಂತ ಹೆಚ್ಚಾಗುವುದಿದ್ದಲ್ಲಿ ವಾಣಿಜ್ಯ ತೆರಿಗೆ ಇಲಾಖೆಯಿಂದ "ಜಿ.ಎಸ್.ಟಿ" ನೊಂದಣಿ ಪಡೆಯಬೇಕಾಗುತ್ತದೆ.<br>13. ಆಹಾರ ಸಂಸ್ಕರಣಾ ಕೈಗಾರಿಕಾ ಚಟುವಟಿಕೆಯಾದಲ್ಲಿ "ಎಫ್.ಎಸ್.ಎಸ್.ಎ.ಐ." ರಹದಾರಿಯನ್ನು ಪಡೆಯಬೇಕಾಗುತ್ತದೆ.<br>14. ಅಪಾಯಕಾರಿ ಕೈಗಾರಿಕಾ ಚಟುವಟಿಕೆಯಾದಲ್ಲಿ "ಫೈರ್ ಸೇಫ್ಟಿ ಪ್ರಮಾಣ ಪತ್ರ" ವನ್ನು ಅಗ್ನಿಶಾಮಕ ಇಲಾಖೆಯಿಂದ ಪಡೆದುಕೊಳ್ಳಬೇಕಾಗುತ್ತದೆ.<br>15. ಕಟ್ಟಡ ನಿರ್ಮಾಣ, ಯಂತ್ರೋಪಕರಣಗಳ ಸ್ಥಾಪನೆಯಾದ ನಂತರ ಕೈಗಾರಿಕಾ ಚಟುವಟಿಕೆಯನ್ನು ಆಧರಿಸಿ ಕರ್ನಾಟಕ ರಾಜ್ಯ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿಯಿಂದ "ಕನ್ಸೆಂಟ್ ಫಾರ್ ಆಪರೇಷನ್" ಅನುಮತಿಯನ್ನು ಪಡೆಯಬೇಕಾಗುತ್ತದೆ. |

ಸಿಐ 33 ಸಿಎಸ್‌ಸಿ 2025

**(ಶರಣಬಸಪ್ಪ ದರ್ಶನಾಪೂರ)**
ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ
ಉದ್ದಿಮೆಗಳ ಸಚಿವರು